**OS No:65/2019**
**DW:3**

(ಇಂದು ದಿನಾಂಕಃ **23-01-2025** ರಂದು ಸಾಕ್ಷಿಯನ್ನು ತೆರೆದ ನ್ಯಾಯಾಲಯಕ್ಕೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.)

**ಮುಖ್ಯ ವಿಚಾರಣೆಃ ಶ್ರೀ ವಿ ಟಿ ಕೆ ವಕೀಲರಿಂದ**

ನನ್ನ ಮುಖ್ಯ ವಿಚಾರಣೆ ಸಲುವಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು ಅದರಲ್ಲಿರುವ ವಿಷಯಗಳು ನಿಜ ಇರುತ್ತವೆ. ಸಾಕ್ಷಿಯು ನಿಡಿ-1 ರ ಮೇಲಿರುವ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿಡಿ-1(ಬಿ)** ಎಂದು ಗುರುತಿಸಲಾಯಿತು. ಸಾಕ್ಷಿಯು ಸಾಕ್ಷಿದಾರರ ಸಹಿಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು **ನಿಡಿ-1 (ಸಿ)** ರಿಂದ **(ಇ)** ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಶ್ರೀ ಎಸ್ ಆರ್ ಎಚ್ ವಕೀಲರಿಂದಃ**

ನಿಡಿ-1 ಕ್ಕೆ ಯಾರು ಮಾಹಿತಿ ನೀಡಿರುತ್ತಾರೆ ಎಂದು ಗೊತ್ತಿಲ್ಲ. ಸದರಿ ದಾಖಲೆಯನ್ನು ಎಲ್ಲಿ ಬೆರಳಚ್ಚು ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸದರಿ ದಾಖಲೆಯಲ್ಲಿ ಏನು ಬರೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. 1 ನೇ ಪ್ರತಿವಾದಿಯ ಮೇರೆಗೆ ನಾನು ಸಹಿ ಮಾಡಿರುತ್ತೇನೆ. ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರಕ್ಕೆ ನಾನೇ ಮಾಹಿತಿ ನೀಡಿರುತ್ತೇನೆ. ವಾದಿ ಹಾಗೂ 2 ರಿಂದ 4 ನೇ ಪ್ರತಿವಾದಿಯರು ನನ್ನ ಸಮಕ್ಷಮ ಹಕ್ಕು ಬಿಟ್ಟು ಕೊಟ್ಟಿರುತ್ತಾರೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿಡಿ-1 ಕ್ಕೆ ನಾನು ನಮ್ಮ ಮನೆಯಲ್ಲಿ ಸಹಿ ಮಾಡಿರುತ್ತೇನೆ. ನಾನು ಹಾಗೂ 1 ನೇ ಪ್ರತಿವಾದಿ ಸೇರಿ ನಿಡಿ-1 ನ್ನು ಸೃಷ್ಠಿಸಿರುತ್ತೇವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ. ಇದೆ.**

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ**
**ನವಲಗುಂದ.**

**OS No:65/2019**
**DW**:4

(ಇಂದು ದಿನಾಂಕಃ **23-01-2025** ರಂದು ಸಾಕ್ಷಿಯನ್ನು ತೆರೆದ ನ್ಯಾಯಾಲಯಕ್ಕೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.)

**ಮುಖ್ಯ ವಿಚಾರಣೆಃ ಶ್ರೀ ವಿ ಟಿ ಕೆ ವಕೀಲರಿಂದ**

ನನ್ನ ಮುಖ್ಯ ವಿಚಾರಣೆ ಸಲುವಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು ಅದರಲ್ಲಿರುವ ವಿಷಯಗಳು ನಿಜ ಇರುತ್ತವೆ. ಸಾಕ್ಷಿಯು ನಿಡಿ-1 ರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿಡಿ-1(ಎಫ್)** ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಶ್ರೀ ಎಸ್ ಆರ್ ಎಚ್ ವಕೀಲರಿಂದಃ**

ನೋಟರಿ ಕಾಯ್ದೆಯ ಪ್ರಕಾರ ಹಕ್ಕು ಬಿಟ್ಟು ಕೊಟ್ಟ ಪತ್ರವನ್ನು ನೋಟರಿ ಮಾಡಲು ನನಗೆ ಅಧಿಕಾರವಿಲ್ಲ ಎಂದರೆ ಸರಿಯಲ್ಲ. ಹಕ್ಕು ಬಿಟ್ಟ ಪತ್ರ ಕಡ್ಡಾಯವಾಗಿ ನೋಂದಣಿಯಾಗಬೇಕು ಎಂದರೆ ಸರಿ. ಸಾಕ್ಷಿಯು ಮುಂದುವರೆದು ನಮ್ಮ ಹತ್ತಿರವು ಸಹ ನೋಟರಿ ಮಾಡಿಸುತ್ತಾರೆ ಎಂದು ನುಡಿದಿರುತ್ತಾರೆ. ನಿಡಿ-1 ರ ಸಾಕ್ಷಿದಾರರು ನನ್ನ ಸಮಕ್ಷಮ ಸಹಿ ಮಾಡಿರುತ್ತಾರೆ. 1 ನೇ ಪ್ರತಿವಾದಿ ವಾದಿಯರಿಗೆ ಮೋಸ ಮಾಡುವ ಉದ್ದೇಶದಿಂದ ವಾರಸ ಸಲುವಾಗಿಯೇ ಎಂದು ನಿಡಿ-1 ನ್ನು ಮೋಸದಿಂದ ಸೃಷ್ಠಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ. ಇದೆ.**

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ**
**ನವಲಗುಂದ.**